**ಸಿ.ಸಿ. ನಂ. 289/2018**

**ಸಾಕ್ಷಿಃ ಸಿ.ಡಬ್ಲ್ಯೂಃ 5 ಪಿ.ಡಬ್ಲ್ಯೂಃ 5**

ಸಾಕ್ಷಿದಾರನ/ಳ ಹೆಸರು : ರಂಗಸ್ವಾಮಿ
ತಂದೆಯ ಹೆಸರು : ದುಮ್ಮಯ್ಯ
ವಯಸ್ಸು : 32 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ದೊಮ್ಮರಟ್ಟಿ

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 31-08-2024**

**ಮುಖ್ಯ ವಿಚಾರಣೆಃ** ಎಪಿಪಿಯವರಿಂದ,

ನನಗೆ ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಯ ಪರಿಚಯ ಇರುತ್ತದೆ. ಚಾಸಾ-4 ಮತ್ತು 6 ರವರ ಪರಿಚಯ ಇರುತ್ತದೆ.

ಈಗ ತೋರಿಸಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸದರಿ ದಾಖಲೆ ಕೃತ್ಯ ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-2(ಇ) ಎಂದು ನಿಶಾನೆಗೊಳಪಡಿಸಲಾಯಿತು. ನಿಪಿ-2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ.

ನನ್ನ ಸಮಕ್ಷಮ ಪೋಲೀಸರು ಯಾವುದೇ ಮಹಜರ್ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಈಗ ನ್ಯಾಯಾಲಯದ ಮುಂದಿರುವ ಮುಮಾ-1 ರಿಂದ 3 ನ್ನು ನೋಡಿ ಗುರ್ತಿಸಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಎಪಿಪಿಯವರು ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಎಪಿಪಿಯವರಿಂದಃ

ದಿಃ04-04-2018 ನಾನು ಮತ್ತು ಚಾಸಾ-5 ರವರು ನಮ್ಮ ಗ್ರಾಮದ ದೇವಸ್ಥಾನದ ಹತ್ತಿರ ಮಾತನಾಡುತ್ತ ನಿಂತಿದ್ದಾಗ ಚಾಸಾ-1 ರವರು ಸಂಜೆಃ 4.30 ಗಂಟೆ ಸಮಯಕ್ಕೆ ಸಿಬ್ಬಂದಿಯೊಂದಿಗೆ ಬಂದಿದ್ದು ನಾನು ಮತ್ತು ಚಾಸಾ-4 ಮತ್ತು 6 ರವರನ್ನು ಕರೆದು ಬಂದ ಮಾಹಿತಿಯನ್ನು ತಿಳಿಸಿ ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ಕೋರಿದ್ದು ಅದಕ್ಕೆ ನಾವು ಒಪ್ಪಿ ಆರೋಪಿಯ ಮನೆಯ ಹತ್ತಿರ ಹೋದೆವು ಎಂದರೆ ಸರಿಯಲ್ಲ. ಮನೆಯ ಹತ್ತಿರ ಹೋದಾಗ ಆರೋಪಿ ವಾಸದ ಮನೆಯ ಜಗುಲಿಯ ಮೇಲೆ ಮದ್ಯ ಮಾರಾಟ ಮಾಡುತ್ತಿದ್ದು ಸ್ಥಳವನ್ನು ಪರಿಶೀಲಿಸಲಾಗಿ 180 ಎಂ ಎಲ್ ನ ಓಲ್ಡ್ ಟವರಿನ್ ವಿಸ್ಕಿಯ **5** ಸ್ಯಾಚೆಟ್ ಗಳು 90 ಎಲ್ ನ ರಾಜ ವಿಸ್ಕಿಯ **10** ಸ್ಯಾಚೆಟ್ ಗಳು, 90 ಎಂ ಎಲ್ ನ ಅಮೃತ್ ಸಿಲ್ವರ್ ಕಪ್ ಬ್ರಾಂಡಿಯ**10** ಸ್ಯಾಚೆಟ್ ಗಳು ಇರುವುದು ಕಂಡು ಬಂತು ಎಂದರೆ ಸರಿಯಲ್ಲ. ದೊರೆತ ಎಲ್ಲಾ ಸ್ವತ್ತುಗಳ ಪೈಕಿ ಒಂದೊಂದನ್ನು ಮಾದರಿಗಾಗಿ ತೆಗೆದು ರಾಸಾಯಿನಿಕ ಪರೀಕ್ಷೆಗಾಗಿ ಅವುಗಳನ್ನು ಬಿಳಿ ಚೀಲದಲ್ಲಿ ಸುತ್ತಿ ಮತ್ತು ದಾರದಲ್ಲಿ ಸುತ್ತಿ ಅವುಗಳಿಗೆ ಓ ಅಕ್ಷರದ ಇಲಾಖಾ ಸೀಲು ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ನಂತರ ದೊರೆತ ಸ್ವತ್ತುಗಳನ್ನು ಮತ್ತು ಆರೋಪಿಯನ್ನು ವಶಕ್ಕೆ ಪಡೆದು ನನ್ನ ಹಾಗೂ ಚಾಸಾ-4 ಮತ್ತು 6 ರವರ ಸಮಕ್ಷಮ ಸಂಜೆಃ5.00ರಿಂದ 5.45 ಗಂಟೆಯವರೆಗೆ ನಿಪಿ-2 ರಂತೆ ಮಹಜರ್ ಮಾಡಿ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-2 ಕ್ಕೆ ನಾನು ಸ್ಥಳದಲ್ಲಿ ಇದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ನಿಪಿ-2 ರಲ್ಲಿನ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ನಾನು ನಿಪಿ-2 ರಂತೆ ಮಹಜರ್ ಕಾಲದಲ್ಲಿ ಹಾಜರಿದ್ದು ನಿಪಿ-5 ರಂತೆ ಹೇಳಿಕೆ ನೀಡಿದ್ದರು ಸಹ ಆರೋಪಿ

ನಮ್ಮ ಊರಿನವರೆ ಆದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ.

ಮರುವಿಚಾರಣೆ ಇಲ್ಲ.

(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾ.ದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಅದೆ.

(ನಾಗೇಂದ್ರ)
**ಸಿವಿಲ್ ನ್ಯಾಯಾಧೀಶರು ಹಾಗೂ**
**ಜೆ.ಎಂ.ಎಫ್.ಸಿ. ನ್ಯಾಯಾಲಯ ಬೇಲೂರು**

**ಸಿ.ಸಿ. ನಂ.**

**ಸಾಕ್ಷಿಃ ಸಿ.ಡಬ್ಲ್ಯೂಃ 2, ಪಿ.ಡಬ್ಲ್ಯೂಃ 1**

ಸಾಕ್ಷಿದಾರನ/ಳ ಹೆಸರು :

ತಂದೆಯ ಹೆಸರು :

ವಯಸ್ಸು : 37 ವರ್ಷ

ಉದ್ಯೋಗ : ಶೇತ್ಕಿ

ವಾಸಸ್ಥಳ : ಮಲಾಬಾದ, ಅಥಣಿ

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 21.12.2023**

**ಮುಖ್ಯ ವಿಚಾರಣೆಃ** ಎಪಿಪಿಯವರಿಂದ,

ಚಾಸಾ1 ಮತ್ತು 3 ರವರ ಪರಿಚಯ ಇರುವುದಿಲ್ಲ. ಈ ಕೇಸಿಗೆ ಸಂಬಂದಿಸಿದಂತೆ 2 ವರ್ಷಗಳ ಹಿಂದೆ ಅಥಣಿ ಪೋಲಿಸರು ನನ್ನನ್ನು ಪೋಲಿಸ ಠಾಣೆಗೆ ಕರೆಯಿಸಿ ಒಂದು ದಾಖಲೆಗೆ ಸಹಿ ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡು ಪಂಚನಾಮೆ ಮಾಡಿರುವುದಿಲ್ಲ. ಸಾಕ್ಷಿ ಸಹಿಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿ.ಪಿ.1 ಎಂದು ಸಹಿಯನ್ನು ನಿ.ಪಿ.1ಎ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಎಪಿಪಿಯವರು ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಎಪಿಪಿಯವರಿಂದಃ

ದಿ.05.05.2018ರಂದು ಮಧ್ಯಾಹ್ನ 4.00 ಗಂಟೆಗೆ ಚಾಸಾ 1ರವರು ಮತ್ತು ಆರೋಪಿತರಿಗೆ ಜಗಳವಾದ ಸ್ಥಳಕ್ಕೆ ನನ್ನನ್ನು ಕರೆಯಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 1ರವರು ತೋರಿಸಿದ ಸ್ಥಳದಲ್ಲಿ ಪಂಚನಾಮೆ ಮಾಡಿ ಹಲ್ಲೆಗೆ ಉಪಯೋಗಿಸಿದ ಒಂದು ಬಡಿಗೆಯನ್ನು ನನ್ನ ಸಮಕ್ಷಮ ವಶಪಡಿಸಿಕೊಂಡು ಈಗ ಓದಿ ಹೇಳಿದಂತೆ ಪಂಚನಾಮೆಯನ್ನು ಬರೆದು ಓದಿ ಹೇಳಿ ಸ್ಥಳದಲ್ಲಿಯೇ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲ ವಿಷಯ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ.

ಮರುವಿಚಾರಣೆ ಇಲ್ಲ.

(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾ.ದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಅದೆ.

4ನೇ ಹೆಚ್ಚುವರಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ. ನ್ಯಾಯಾಲಯ ಅಥಣಿ.